ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 17/03/2020

# ಕರೋನಾ ಬಗೆಗಿನ ಕಾಳಜಿ ಮಂಗನ ಕಾಯಿಲೆಗಿಲ್ಲ

## ಸರಕಾರದ ವಿರುದ್ಧ ಹರತಾಳು ಹಾಲಪ್ಪ ಗರಂ

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

'ರಾಜ್ಯದಲ್ಲಿ ಕರೋನಾ ಭೀತಿ ಆವರಿಸಿರುವ ಹೊತ್ತಲ್ಲೇ, ಮಲೆನಾಡ ಭಾಗದಲ್ಲಿ ಮಂಗನ ಕಾಯಿಲೆ ಹಾಗೂ ಮೈಸೂರು, ದಾವಣಗೆರೆಯಲ್ಲಿ ಹಕ್ಕಿ ಜ್ವರ ಕಾಣಿಸಿಕೊಳ್ಳುವ ಮೂಲಕ ಜನರನ್ನು ಆತಂಕಕ್ಕೀಡು ಮಾಡಿದೆ' ಎಂದು ಬಿಜೆಪಿ ಶಾಸಕ ಹರತಾಳು ಹಾಲಪ್ಪ ವಿಧಾನಸಭೆಯಲ್ಲಿ ಗಮನ ಸೆಳೆದರು.



ಕಳೆದ ಕೆಲ ವರ್ಷಗಳಿಂದ ಪ್ರತಿವರ್ಷ ಸಾಗರ, ತೀರ್ಥಹಳ್ಳಿ, ಶಿರಸಿ-ಸಿದ್ದಾಪುರ ಸೇರಿದಂತೆ ಮಲೆನಾಡ ಭಾಗದಲ್ಲಿ ಮಂಗನ ಕಾಯಿಲೆ ಕಾಣಿಸಿಕೊಳ್ಳುತ್ತಿದೆ. ರಾಜ್ಯ ಸರಕಾರ ಈ ಬಗ್ಗೆ ಗಮನ ಹರಿಸಿಲ್ಲ. ಇಲ್ಲಿಯವರೆಗೆ 43 ಜನರು ಮಂಗನ ಕಾಯಿಲೆಯಿಂದ ಮೃತಪಟ್ಟರೂ ತಲೆಕೆಡಿಸಿಕೊಂಡಿಲ್ಲ. ಆದರೆ ಬೆಂಗಳೂರಿನ ಟೆಕ್ಕಿಯೊಬ್ಬರಿಗೆ ಕರೋನಾ ಬಂದ ಕೂಡಲೇ, ಇಡೀ ಆಡಳಿತ ಯಂತ್ರ ಅತ್ತ ಗಮನಹರಿಸಿದೆ. ಹಲವು ಬಾರಿ ಮಂಗನ ಕಾಯಿಲೆ ಬಗ್ಗೆ ಕ್ರಮ ವಹಿಸುವಂತೆ ಮನವಿ ಮಾಡಿದರೂ ಈ ಬಗ್ಗೆ ಯಾವ ಅಧಿಕಾರಿಗಳು ತಲೆಕೆಡಿಸಿಕೊಳ್ಳುತ್ತಿಲ್ಲ. ತೀರ್ಥಹಳ್ಳಿ, ಸಾಗರ ಭಾಗದಲ್ಲಿ ಮಂಗನ ಕಾಯಿಲೆಗೆ ಮನುಷ್ಯರು ನಾಯಿ, ನರಿಗಳ ರೀತಿ ಸಾಯುತ್ತಿದ್ದಾರೆ. ಆದರೆ ಈ ಬಗ್ಗೆ ಕೊಂಚವೂ ಗಮನಹರಿಸಿಲ್ಲ' ಎಂದು ವಿಧಾನಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಅಸಮಾಧಾನ ಹೊರಹಾಕಿದರು.

'ಈಗಾಗಲೇ ರಾಜ್ಯ ಸರಕಾರ ಔಷಧ ಕಂಡುಹಿಡಿದಿದ್ದರೂ, ಇದು ಸೂಕ್ತ ರೀತಿ ಕಾರ್ಯನಿರ್ವಹಿಸುತ್ತಿಲ್ಲ. ಆದ್ದರಿಂದ ಈ ಬಗ್ಗೆ ಕ್ಲಿನಿಕಲ್ ಸಂಶೋಧನೆಯ ಮೂಲಕ ನೂತನ ಔಷಧ ಕಂಡುಹಿಡಿಯಬೇಕು. ಈ ಹಿಂದಿನ ಸಮ್ಮಿಶ್ರ ಸರಕಾರದ ಅವಧಿಯಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಆದರೆ ಈ ಸರಕಾರದಲ್ಲಿ ಇದ್ಯಾವ ಕೆಲಸಗಳೂ ಆಗುತ್ತಿಲ್ಲ. ಪ್ರಧಾನ ಕಾರ್ಯದರ್ಶಿಗಳನ್ನು ಭೇಟಿಯಾಗಲು ನಾಲ್ಕು ಬಾರಿ ಹೋದರೂ ಒಮ್ಮೆಯೂ ಸಿಕ್ಕಿಲ್ಲ' ಎಂದು ಕಿಡಿಕಾರಿದರು.

**ಧರಣಿ ಮಾಡುವುದಾಗಿ ಎಚ್ಚರಿಸಿದ ಹಾಲಪ್ಪ:** ಈ ವೇಳೆ ಆರೋಗ್ಯ ಸಚಿವ ಶ್ರೀರಾಮುಲು ಅವರು ಉತ್ತರಿಸಲು ಮುಂದಾಗಿ, ಎಲ್ಲ ರೀತಿಯ ಕ್ರಮ ವಹಿಸಲಾಗಿದೆ. ಯಾವುದೇ ಸಮಸ್ಯೆಯಾಗದ ರೀತಿಯಲ್ಲಿ ನೋಡಿಕೊಳ್ಳಲಾಗುವುದು ಎನ್ನುವ ಹಾರಿಕೆಯ ಉತ್ತರ ನೀಡಲು ಮುಂದಾದರು. ಇದರಿಂದ ಸಿಟ್ಟಿಗೆದ್ದ ಹಾಲಪ್ಪ, 'ಪ್ರತಿ ಬಾರಿಯೂ ಇದೇ ಮಾತನ್ನು ಹೇಳಲಾಗುತ್ತಿದೆ. ಅಲ್ಲಿ ಜನರು ಸಾಯುತ್ತಲೇ ಇದ್ದಾರೆ. ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆ ಸಾವಿನ ಕೂಪವಾಗಿದೆ. ಈ ಬಗ್ಗೆ ಗಮನಹರಿಸುತ್ತಿಲ್ಲ. ಒಂದು ವೇಳೆ ಇದೇ ರೀತಿಯ ಹಾರಿಕೆಯ ಉತ್ತರ ನೀಡಿದರೆ ಬಾವಿಗಿಳಿದು ಧರಣಿ' ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

→ 6

### ಹಕ್ಕಿ ಜ್ವರ ದೃಢ

ಕರೋನಾ ವೈರಸ್ ಹಾವಳಿಯ ನಡುವೆಯೇ ಹಕ್ಕಿ ಜ್ವರದ (ಎಚ್5ಎನ್1) ಭೀತಿ ಎದುರಾಗಿದೆ. ಮೈಸೂರು ಮತ್ತು ದಾವಣಗೆರೆಯಲ್ಲಿ ಈ ಸೋಂಕು ಇರುವುದು ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯ ಪ್ರಯೋಗಾಲಯ ಖಚಿತಪಡಿಸಿದೆ. ಮೈಸೂರಿನಲ್ಲಿ ಕಳೆದ ಒಂದು ವಾರದಲ್ಲಿ ಹನ್ನೆರಡು ಕೊಕ್ಕರೆಗಳು ಮೃತಪಟ್ಟಿದ್ದರೂ ಈವರೆಗೂ ಪಶು ಇಲಾಖೆ ಇಲ್ಲವೇ, ಆರೋಗ್ಯ ಇಲಾಖೆ ಈ ಕುರಿತು ಯಾವುದೇ ಕ್ರಮ ಕೈಗೊಂಡಿರಲಿಲ್ಲ. ನೆರೆಯ ಕೇರಳದಲ್ಲಿ ಹಕ್ಕಿಜ್ವರ ಕಾಣಿಸಿಕೊಂಡಿರುವುದರಿಂದ ಕೊಕ್ಕರೆಗಳ ಸಾವು ಮೈಸೂರಿನಲ್ಲಿ ತಲ್ಲಣ ಉಂಟು ಮಾಡಿದೆ. ಮೈಸೂರಿನ ಕಾಟಚಂದ್ರ ಕುಂಬಾರಕೊಪ್ಪಲು, ದಾವಣಗೆರೆಯ ಬನ್ನಿಕೋಡ್‌ನ ಹನುಮಂತಪ್ಪ ಎಂಬುವವರ ಕೋಳಿ ಫಾರಂನಲ್ಲಿ ಹಕ್ಕಿ ಜ್ವರ ಪತ್ತೆಯಾಗಿದೆ.

ದಿನಾಂಕ: 17/03/2020

# ಕರೋನಾ ಬಗೆಗಿನ ಕಾಳಜಿ ಮಂಗನ ಕಾಯಿಲೆಗಿಲ್ಲ

← ಮೊದಲ ಪುಟದಿಂದ

ಇದಕ್ಕೆ ಪ್ರತಿಕ್ರಿಯಿಸಿದ ಶ್ರೀರಾಮುಲು ಅವರು, 'ಈಗಾಗಲೇ ಈಶ್ವರಪ್ಪ ಅವರು ಸಾಗರದಲ್ಲಿ ಸಂಶೋಧನಾ ಘಟಕ ಆರಂಭಿಸಲು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿದ್ದಾರೆ. ಕೂಡಲೇ ಇದಕ್ಕೆ ಒಪ್ಪಿಗೆ ನೀಡಲಾಗುವುದು. ಇದರೊಂದಿಗೆ ಶಾಸಕರೊಂದಿಗೆ ಯಾವುದೇ ಅಧಿಕಾರಿಗಳು ಅನುಚಿತವಾಗಿ ವರ್ತಿಸಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು' ಎಂದು ಸ್ಪಷ್ಟಪಡಿಸಿದರು.

**ಮಣಿಪಾಲ್ ಆಸ್ಪತ್ರೆ ಮೊತ್ತ ಮರುಪಾವತಿಗೆ ಒಪ್ಪಿಗೆ:** ಕಳೆದ ವರ್ಷ ಮಂಗನ ಕಾಯಿಲೆ ತುತ್ತಾದವರು ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ವೆಚ್ಚವನ್ನು ಮರುಪಾವತಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್ ಭರವಸೆ ನೀಡಿದ್ದಾರೆ.
ಹರತಾಳು ಹಾಲಪ್ಪ ಅವರ ಪ್ರಸ್ತಾವನೆಗೆ ತಕ್ಷಣ ಸ್ಪಂದಿಸಿದ ರಾಜ್ಯ ಸರಕಾರ, ಕಳೆದ ವರ್ಷ ವೆಂಟಿಲೆಂಟರ್‌ವುಳ್ಳ ಮೂರು ಆ್ಯಂಬುಲೆನ್ಸ್‌ಗಳನ್ನು ನಿಯೋಜಿಸಿದ ರೀತಿಯಲ್ಲಿಯೇ ಈ ವರ್ಷವೂ ನಿಯೋಜಿಸಲಾಗುವುದು. ಹಾಗೂ ಕೋಣಂದೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಆ್ಯಂಬುಲೆನ್ಸ್ ಒದಗಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಮಂಗನ ಕಾಯಿಲೆಗೆ ತುತ್ತಾಗುವವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಆದೇಶದಲ್ಲಿ ಪ್ರಸ್ತಾಪಿಸಿದ್ದಾರೆ. ತಕ್ಷಣ ತಮ್ಮ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು, ಆರೋಗ್ಯ ಸಚಿವರು, ಇಲಾಖೆಯ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ಶಾಸಕ ಹರತಾಳು ಹಾಲಪ್ಪ ತಿಳಿಸಿದ್ದಾರೆ.